ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ನನ್ನ ಹೆಣ ಕೂಡ ಬಿಜೆಪಿ ಸೇರಲ್ಲ ಎಂದಿದ್ದಾರೆ. ಹೆಣವನ್ನು ಮನೆಯಲ್ಲೂ ಮೂರು ದಿನ ಇಟ್ಟುಕೊಳ್ಳುವುದಿಲ್ಲ. ಮನುಷ್ಯನ ಹೆಣಕ್ಕೆ ಮೂರು ಕಾಸಿನ ಬೆಲೆ ಇಲ್ಲ. ಅದು ಎದ್ದು ಬಂದು ವೋಟು ಕೂಡ ಹಾಕಲ್ಲ. ಯಾರಾದರೂ ಹೆಣ ತಗೊಂಡು ರಾಜಕಾರಣ ಮಾಡಲು ಆಗುತ್ತದೆಯೇ ?
• **ಸಿ.ಟಿ.ರವಿ** ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ

ಮನೆ ನಿರ್ಮಾಣಕ್ಕೆ ಸರಳ ಕಾಯ್ದೆ

ಬಡವರ ಕೈಗೆಟಕುವ ದರದಲ್ಲಿ ಜಾಗ ದೊರೆಯುವ ವ್ಯವಸ್ಥೆ ಜಾರಿಗೆ: ಸಿಎಂ ಬೊಮ್ಮಾಯಿ

ಅಗ್ರಹಾರಪಾಳ್ಯದಲ್ಲಿ 1 ಲಕ್ಷ ವಸತಿ ಯೋಜನೆಯಡಿ ನಿರ್ಮಿಸಿದ ಮನೆಗಳ ಹಸ್ತಾಂತರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಡವರು ನಿವೇಶನ ಖರೀದಿಗೆ ಹಾಗೂ ಮನೆ ನಿರ್ಮಾಣಕ್ಕೆ ಅನುಕೂಲವಾಗುವಂತೆ ಕಾನೂನು ಸರಳೀಕರಣ ಮಾಡಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಬೆಂಗಳೂರಿನ ಯಲಹಂಕ ತಾಲೂಕಿನ ಅಗ್ರಹಾರಪಾಳ್ಯದಲ್ಲಿ ಮಂಗಳವಾರ ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯ ಲೋಕಾರ್ಪಣೆ ಮತ್ತು ವಸತಿ ಹಸ್ತಾಂತರ ಮಾಡಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಮನೆ ಕಟ್ಟುವುದು ಕಷ್ಟವಾಗಲಿದೆ. ಕಂದಾಯ ಕಾಯ್ದೆಯಲ್ಲಿ ಮನೆ ಕಟ್ಟಲು ನಿರ್ದಿಷ್ಟ ರಿಯಾಯಿತಿಗಳಿಲ್ಲ. ಭೂಮಿಯ ಬೇಡಿಕೆ ಹೆಚ್ಚಾಗಿದೆ. ಕಾನೂನುಗಳಿಂದ ಸಾಮಾನ್ಯ ಜನರು ನಿವೇಶನ ಖರೀದಿ ಮಾಡುವ ಪರಿಸ್ಥಿತಿ ಇಲ್ಲ. ಹೀಗಾಗಿ ಮನೆ ಕಟ್ಟಲು ಅವಕಾಶ ಸಿಗುವಂತೆ ಕಾನೂನಿಗೆ ತಿದ್ದುಪಡಿ ತಂದು, ನಿರ್ಬಂಧಗಳನ್ನು ಸರಳೀಕರಣ ಮಾಡಿ ಕೈಗೆಟುಕುವ ಬೆಲೆಯಲ್ಲಿ ಜಮೀನು ದೊರೆಯುವ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು. ವಸತಿಗಾಗಿಯೇ ಜಮೀನು ಪಡೆಯಲು, ಮನೆ ಕಟ್ಟಲು ಎಲ್ಲಾ ಕಾನೂನನ್ನು ಸರಳೀಕರಣ ಮಾಡಲಾಗುವುದು ಎಂದು ಭರವಸೆ ನೀಡಿದರು.

ಬಿಡಿಎ ಅಧ್ಯಕ್ಷ ಎಸ್.ಆರ್.ವಿಶ್ವನಾಥ್, ಶಾಸಕ ಸಿದ್ದು ಸವದಿ, ಸಚ್ಚಿದಾನಂದ ಮೂರ್ತಿ, ನಾಗರಾಜ್, ಡಾ। ಜೆ.ರವಿಶಂಕರ್, ಜಿಲ್ಲಾಧಿಕಾರಿ ಕೆ.ಎ.ದಯಾನಂದ್ ಉಪಸ್ಥಿತರಿದ್ದರು.

ವಸತಿ ಇಲಾಖೆಯಿಂದ ನಿರ್ಮಿಸಲಾದ ಮನೆಗಳ ಹಕ್ಕುಪತ್ರಗಳನ್ನು ಫಲಾನುಭವಿಗಳಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಂಗಳವಾರ ವಿತರಣೆ ಮಾಡಿದರು. ವಸತಿ ಸಚಿವ ವಿ.ಸೋಮಣ್ಣ, ಬಿಡಿಎ ಅಧ್ಯಕ್ಷ ಎಸ್.ಆರ್.ವಿಶ್ವನಾಥ, ಶಾಸಕ ಸಿದ್ದು ಸವದಿ, ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷ ಸಚ್ಚಿದಾನಂದ ಮೂರ್ತಿ, ಮಾಜಿ ಶಾಸಕ ನಾಗರಾಜ್ ಇದ್ದರು.

5 ಲಕ್ಷ ಮನೆಗಳು ಅಂತಿಮ ಹಂತದಲ್ಲಿ: ಸಿಎಂ

ಘೋಷಣೆಗಳು ಬಹಳಷ್ಟು ಆಗುತ್ತವೆ. ಆದಕ್ಕೆ ಹಣ ಮೀಸಲಿಡಬೇಕು. ಆರು ವರ್ಷಗಳ ಹಿಂದೆ 15 ಲಕ್ಷ ಮನೆ ಕಟ್ಟುವುದಾಗಿ ಘೋಷಣೆಯಾಯಿತು. ಹಿಂದಿನ ಸರ್ಕಾರ ಚುನಾವಣೆ ಸಂದರ್ಭದಲ್ಲಿ 15 ಲಕ್ಷ ಮನೆ ಘೋಷಣೆ ಮಾಡಿತ್ತು. ಆದಕ್ಕೆ ಹಣ ಮೀಸಲಿಡದೇ ಹೋಯಿತು. ₹5 ಸಾವಿರ ಕೋಟಿ ಅಗತ್ಯವಿದ್ದರೆ, ₹3 ಸಾವಿರ ಕೋಟಿ ಮೀಸಲಿಟ್ಟರು. ಅಗತ್ಯವಿರುವಷ್ಟು ಮನೆಗಳನ್ನು ಕಟ್ಟಲು ಸಾಧ್ಯವಾಗಲಿಲ್ಲ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅಗತ್ಯ ಅನುದಾನ ಒದಗಿಸಿ ಸುಮಾರು 10 ಲಕ್ಷ ಮನೆಗಳನ್ನು ಕಟ್ಟುವ ಗುರಿ ಹೊಂದಿ ಪ್ರಸ್ತುತ 5 ಲಕ್ಷ ಮನೆಗಳನ್ನು ಪೂರ್ಣಗೊಳಿಸುವ ಕೊನೆಯ ಹಂತದಲ್ಲಿ ಇದ್ದೇವೆ ಎಂದು ಮುಖ್ಯಮಂತ್ರಿ ಹೇಳಿದರು. ವಿ.ಸೋಮಣ್ಣ ವಸತಿ ಸಚಿವರಾದ ಬಳಿಕ ಗೃಹ ನಿರ್ಮಾಣಕ್ಕೆ ಒಂದು ರೂಪುರೇಷೆ ನೀಡಿ, ಬಾಕಿ ಇರುವ ಮನೆಗಳ ನಿರ್ಮಾಣ ಮಾಡುತ್ತಿದ್ದಾರೆ. ಆಯ್ಕೆಯಾಗಿದ್ದ ಅನರ್ಹರನ್ನು ತೆಗೆಯಲು ವಿಶೇಷ ಸಾಫ್ಟ್‌ವೇರ್ ಅಳವಡಿಸಿದ್ದಾರೆ. ಗ್ರಾಮೀಣ ಪ್ರದೇಶದ ಮನೆಗಳ ನಿರ್ಮಾಣ ಕೈಗೊಂಡು ಈ ವರ್ಷ 5 ಲಕ್ಷ ಮನೆಗಳನ್ನು ನಿರ್ಮಾಣ ಮಾಡಿ ಅಂತಿಮ ಹಂತಕ್ಕೆ ತಂದಿದ್ದಾರೆ ಎಂದು ಹೇಳಿದರು. ಇನ್ನು ವಿಶ್ವನಾಥ ಶಾಸಕರಾದ ಮೇಲೆ ಯಲಹಂಕ ಚಿತ್ರಣವೇ ಬದಲಾಗಿದೆ. ಗ್ರಾಮೀಣ ಮತ್ತು ನಗರ ಪ್ರದೇಶ ಎರಡನ್ನೂ ಯಶಸ್ವಿಯಾಗಿ ನಿಭಾಯಿಸಿದ್ದಾರೆ. ಮುಂದಿನ 20 ವರ್ಷಗಳಲ್ಲಿ ಆಗುವ ಕೆಲಸವನ್ನು ಈಗಲೇ ಮಾಡಿದ್ದಾರೆ ಎಂದು ಶ್ಲಾಘಿಸಿದರು.

ಬೆಳೆಯುತ್ತಿರುವ ನಾಗರಿಕತೆಯಲ್ಲಿ ಬಡವರಿಗೆ ಪುಟ್ಟ ಮನೆ ಕಟ್ಟಿ ಕೊಡುವ ಅವಕಾಶವನ್ನು ಸಮಾಜ ನೀಡಬೇಕು. ನಮ್ಮ ಸರ್ಕಾರ ಸಮಸ್ಯೆಯನ್ನು ಬಿಟ್ಟು ಹೋಗುವುದಿಲ್ಲ, ಪರಿಹಾರ ಕೊಟ್ಟು ಜನರಿಗೆ ಎಲ್ಲಾ ರೀತಿಯ ಸೌಲಭ್ಯ ನೀಡುವ ಕೆಲಸ ಮಾಡಲಿದೆ.
• **ಬಸವರಾಜ ಬೊಮ್ಮಾಯಿ** ಮುಖ್ಯಮಂತ್ರಿ

ಹಿಂದಿನ ಸರ್ಕಾರದ ಯೋಜನೆಗಳು ಕೇವಲ ಕಾಗದದಲ್ಲಿ ಮಾತ್ರ ಇದ್ದವು. ವಸತಿ ಇಲಾಖೆಯಲ್ಲಿ ಯಾವುದೇ ಕೆಲಸ ಆಗಿರಲಿಲ್ಲ. ನಮ್ಮ ಸರ್ಕಾರ ಬಂದ ಮೇಲೆ 52 ಸಾವಿರ ಮನೆ ನಿರ್ಮಾಣ ಕಾರ್ಯದ ಅಂತಿಮ ಹಂತಕ್ಕೆ ತಲುಪಿದ್ದೇವೆ. ಇಂದು 5 ಸಾವಿರ ಮನೆ ಹಂಚಿಕೆ ಮಾಡುತ್ತಿದ್ದೇವೆ.
• **ವಿ.ಸೋಮಣ್ಣ** ವಸತಿ ಸಚಿವ

ಪುಕ್ಕಟೆ ಕೊಟ್ರೆ ಜನ ನಂಬುವುದಿಲ್ಲ: ಬೊಮ್ಮಾಯಿ

ಎಲ್ಲವನ್ನೂ ಪುಕ್ಕಟೆಯಾಗಿ ನೀಡಿದ್ದೇವೆ ಎಂದರೆ ಜನ ನಂಬುವ ಸ್ಥಿತಿ ಇಲ್ಲ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಾಂಗ್ರೆಸ್ ಪಕ್ಷದಿಂದ ಉಚಿತ ಯೋಜನೆ ಘೋಷಣೆಗೆ ಟಾಂಗ್ ನೀಡಿದ್ದಾರೆ. ಜನರನ್ನು ಭ್ರಮಾ ಲೋಕದಲ್ಲಿಡುವ ಪ್ರಯತ್ನ ನಡೆಯುತ್ತಿದೆ. ಆದರೆ, ಜನರು ಬುದ್ಧಿವಂತರಿದ್ದಾರೆ, ಜಾಗೃತರಾಗಿದ್ದಾರೆ ಎಂಬುದನ್ನು ಜನಪ್ರತಿ ನಿಧಿಗಳು ಅರ್ಥ ಮಾಡಿಕೊಳ್ಳಬೇಕು. ಸುಳ್ಳು ಭರವಸೆ ಕೊಟ್ಟು ಜನರನ್ನು ದಾರಿತಪ್ಪಿಸುವ ಕೆಲಸ ಮಾಡಬಾರದು. ಎಲ್ಲಾ ಸಮಯದಲ್ಲಿ ಎಲ್ಲರನ್ನೂ ಮೋಸ ಮಾಡಲು ಸಾಧ್ಯವಿಲ್ಲ ಎಂದು ಅರ್ಥ ಮಾಡಿಕೊಳ್ಳಬೇಕು. ತೆರಿಗೆ ಮೂಲಕ ಬರುವ ಹಣವನ್ನು ಎಲ್ಲಿ ಉಪಯೋಗಿಸಬೇಕು. ದೀನ ದಲಿತರಿ ಗೆ ವಿಶೇಷವಾಗಿರುವ ಕಾರ್ಯಕ್ರಮ ರೂಪಿಸಬೇಕು. ಜನಪ್ರಿಯತೆಗಾಗಿ, ಅಧಿಕಾರಕ್ಕೆ ಬರಬೇಕೆಂದು ಹತಾಶರಾಗಿ ಇಡೀ ವ್ಯವಸ್ಥೆಯನ್ನು ನಾವು ಕೆಡಿಸುವ ಲೆಕ್ಕದಲ್ಲಿ ಮಾತನಾಡಬಾರದು. ಜನರು ಎಲ್ಲವನ್ನೂ ಅರ್ಥಮಾಡಿಕೊಳ್ಳುತ್ತಾರೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

ಇಂದಿನಿಂದ ಎಬಿವಿಪಿ ವಿದ್ಯಾರ್ಥಿ ಏಕಾತ್ಮತಾ ಯಾತ್ರೆ

ಬೆಂಗಳೂರು: ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನಿಂದ ಆಯೋಜಿಸುವ 'ರಾಷ್ಟ್ರೀಯ ಏಕಾತ್ಮತಾ ಯಾತ್ರೆ' ಫೆ.1ರಂದು ಆರಂಭವಾಗಲಿದೆ ಎಂದು ಪರಿಷತ್‌ನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಯಾಜ್ಞವಲ್ಕ್ಯ ಶುಕ್ಲಾ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂತರ ರಾಜ್ಯ ಜೀವನದಲ್ಲಿ ವಿದ್ಯಾರ್ಥಿಗಳ ಅನುಭವ (ಎಸ್ ಇಐಎಲ್) ಕಲ್ಪನೆಯಡಿ ಈಶಾನ್ಯ ರಾಜ್ಯಗಳ ವಿದ್ಯಾರ್ಥಿಗಳನ್ನು ದೇಶದ ಇತರೆಡೆಯ ರಾಜ್ಯಗಳಿಗೆ ಕರೆತಂದು ಅಲ್ಲಿನ ಸಂಸ್ಕೃತಿಗಳ ಪರಿಚಯ ಮಾಡಿಕೊಡಲಾಗುತ್ತಿದೆ. ಅದೇ ರೀತಿ ಇತರೆ ರಾಜ್ಯಗಳ ವಿದ್ಯಾರ್ಥಿಗಳನ್ನು ಈಶಾನ್ಯ ರಾಜ್ಯಕ್ಕೆ ಕರೆದುಕೊಂಡು ಹೋಗಿ ಅಲ್ಲಿನ ಆಚಾರ ವಿಚಾರಗಳ ಮನವರಿಕೆ ಮಾಡಿಕೊಡಲಾಗುತ್ತಿದೆ. ಒಟ್ಟಾರೆ 450ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಯಾತ್ರೆಯಲ್ಲಿ ಪಾಲ್ಗೊಂಡಿದ್ದು, ಈ ಬಾರಿ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕರ್ನಾಟಕಕ್ಕೆ ಬರುತ್ತಿದ್ದು 38 ವಿದ್ಯಾರ್ಥಿಗಳು ಬೆಂಗಳೂರಿನ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವರು. ಉಳಿದವರು ಮೈಸೂರಿಗೆ ತೆರಳಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಹರಿಕೃಷ್ಣನಗೋತು, ಪ್ರೇಮಶ್ರೀ ಜೋಡಿದಾರ್, ಬೆಂಗಳೂರು ಮಹಾನಗರ ಕಾರ್ಯದರ್ಶಿ ಲಕ್ಷ್ಮೀನಾರಾಯಣ, ತೇಜಸ್ವಿ ರೆಡ್ಡಿ ಇದ್ದರು.